# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಗೆ ಬೇಕಾಗುವ ಲೇಖನ ಸಾಮಗ್ರಿಗಳು, ಸಭೆ / ಸಮಾರಂಭಗಳ ವೆಚ್ಚಗಳು, ಹೊರಗುತ್ತಿಗೆ ನೌಕರರ ವೇತನಗಳು ಮತ್ತು ವಾಹನಗಳಿಗೆ, ಅಧಿವೇಶನಗಳು ಜರುಗುವ ಸಮಯದಲ್ಲಿ ವಾಹನಗಳಿಗೆ ತಗಲುವ ವೆಚ್ಚಗಳು ಹಾಗೂ ಇನ್ನಿತರ ವೆಚ್ಚಗಳನ್ನು ಭರಿಸಲು ಮೊತ್ತವನ್ನು ಐಡೆಕ್ ಸಂಸ್ಥೆಗೆ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: ಐಡೆಕ್ ಸಂಸ್ಥೆಯ ಪತ್ರ ದಿನಾಂಕ 16.12.2021.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಕಾರ್ಪೊರೇಷನ್ (ಕರ್ನಾಟಕ) ಲಿಮಿಟೆಡ್ (ಐಡೆಕ್) ಸಂಸ್ಥೆಯವರು ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಗೆ ಬೇಕಾಗುವ ಲೇಖನ ಸಾಮಗ್ರಿಗಳು, ಸಭೆ / ಸಮಾರಂಭಗಳ ವೆಚ್ಚಗಳು, ಹೊರಗುತ್ತಿಗೆ ನೌಕರರ ವೇತನಗಳು ಮತ್ತು ವಾಹನಗಳಿಗೆ, ಅಧಿವೇಶನಗಳು ಜರುಗುವ ಸಮಯದಲ್ಲಿ ವಾಹನಗಳಿಗೆ ತಗಲುವ ವೆಚ್ಚಗಳು ಹಾಗೂ ಇನ್ನಿತರ ವೆಚ್ಚಗಳನ್ನು ಭರಿಸಲು ರೂ.50.00 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 3451-00-090-1-06-059- PPP Development Activities-Other Expenses ಅಡಿಯಲ್ಲಿ ಬಿಡುಗಡೆ ಮಾಡಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

2. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಐಡಿಡಿ 129 ಐಟಿಎಸ್ 2021,</u>**

**<u>ಬೆಂಗಳೂರು, ದಿನಾಂಕ: 30.12.2021</u>**

ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಗೆ ಬೇಕಾಗುವ ಲೇಖನ ಸಾಮಗ್ರಿಗಳು, ಸಭೆ / ಸಮಾರಂಭಗಳ ವೆಚ್ಚಗಳು, ಹೊರಗುತ್ತಿಗೆ ನೌಕರರ ವೇತನಗಳು ಮತ್ತು ವಾಹನಗಳಿಗೆ, ಅಧಿವೇಶನಗಳು ಜರುಗುವ ಸಮಯದಲ್ಲಿ ವಾಹನಗಳಿಗೆ ತಗಲುವ ವೆಚ್ಚಗಳು ಹಾಗೂ ಇನ್ನಿತರ ವೆಚ್ಚಗಳನ್ನು ಭರಿಸಲು ರೂ.30.00 ಲಕ್ಷ (ರೂಪಾಯಿ ಮೂವತ್ತು ಲಕ್ಷಗಳು ಮಾತ್ರ)ಗಳನ್ನು ಐಡೆಕ್ ಸಂಸ್ಥೆಗೆ ಬಿಡುಗಡೆ ಮಾಡಲು ಸರ್ಕಾರವು ಮಂಜೂರಾತಿ ನೀಡಿದೆ.

2. ಈ ಮೊತ್ತವನ್ನು ಲೆಕ್ಕ ಶೀರ್ಷಿಕೆ 3451-00-090-1-06-059- PPP Development Activities-Other Expenses ಅಡಿಯಲ್ಲಿ ಭರಿಸತಕ್ಕದ್ದು.

3. ಸದರಿ ಮೊತ್ತವನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಐಡೆಕ್ ಇವರು ಹಣ ಸ್ವೀಕೃತಿ ರಸೀದಿಯ ಮೂಲಕ ಸರ್ಕಾರದ ಅಧೀನ ಕಾರ್ಯದರ್ಶಿ-2, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ ಇವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆ, ಬೆಂಗಳೂರು ಇವರಿಂದ ಪಡೆಯಲು ಅನುಮತಿ ನೀಡಲಾಗಿದೆ. ಸದರಿ ಮೊತ್ತವನ್ನು "ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಕಾರ್ಪೊರೇಷನ್ (ಕರ್ನಾಟಕ) ಲಿಮಿಟೆಡ್" ರವರ ಹೆಸರಿಗೆ ನೀಡುವುದು.

4. ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಅಇ 01 ಟಿಎಫ್‌ಪಿ 2021, ದಿನಾಂಕ 05.04.2021 ರಡಿಯಲ್ಲಿ ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕಲಾವತಿ ಎಸ್.ಎನ್.)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮೂಲಸೌಲಭ್ಯ ಅಭಿವೃದ್ಧಿ, ಬಂದರು
ಮತ್ತು ಒಳನಾಡು ಜಲಸಾರಿಗೆ ಇಲಾಖೆ.

ಗೆ,

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಆ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ, ಐಡೆಕ್, ನಂ.9/7, ಕೆ.ಸಿ.ಎನ್. ಭವನ, ಯಮುನಾ ಬಾಯಿ ರಸ್ತೆ, ಮಾಧವನಗರ ಬಡಾವಣೆ, ಬೆಂಗಳೂರು.
5. ಜಂಟಿ ನಿರ್ದೇಶಕರು, (ಪಿಎಮ್ & ಐ ವಿಭಾಗ), ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಮ್.ಸಿ, ಖನಿಜ ಭವನ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-1), ವಿಧಾನಸೌದ, ಬೆಂಗಳೂರು.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ-1, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ.